ಸರ್ಕಾರಿ ಮುದ್ರಣಾಲಯದ ದಿನಗೂಲಿ ನೌಕರರು

1403 (1974)

ಶ್ರೀ ಉಜ್ಜೈನೇಶ್ವರ ಬಸವನಪ್ಪ ಬಣಕಾರ್ (ಹಿರೇಕೆರೂರು): ಮಾನ್ಯ ವಯಸ್ಕರ ಶಿಕ್ಷಣ ಮತ್ತು ಸಾರ್ವಜನಿಕ ಗ್ರಂಥಾಲಯಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮತ್ತು ಧಾರವಾಡ ಸರ್ಕಾರಿ ಮುದ್ರಣಾಲಯಗಳಲ್ಲಿ ದಿನಗೂಲಿಯಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು?

ಆ) ಅವರು ಎಂದಿನಿಂದ ಕೆಲಸ ಮಾಡುತ್ತಿದ್ದಾರೆ?

ಇ) ಅವರನ್ನು ಯಾವಾಗ ಖಾಯಂ ಮಾಡಲಾಗುವುದು?

ಶ್ರೀ ಆರ್.ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಸಾರ್ವಜನಿಕ ಗ್ರಂಥಾಲಯ ರಾಜ್ಯ ಸಚಿವರು.

ಅ) 1) ಬೆಂಗಳೂರಿನಲ್ಲಿ 368 ಜನ.

2) ಧಾರವಾಡದಲ್ಲಿ 17 ಜನ.

ಆ) ಸುಮಾರು 10 ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುತ್ತಾರೆ.

ಇ) ಈ ವಿಷಯವು ರಾಜ್ಯದ ಬಹುತೇಕ ಎಲ್ಲಾ ಇಲಾಖೆಗಳಲ್ಲಿನ ಸಮಸ್ಯೆಯಾಗಿದ್ದು ಇದು ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿ ಹೊಸ ಗ್ರಂಥಾಲಯಗಳ ಸ್ಥಾಪನೆ

1404 (1975)

ಶ್ರೀ ಉಜ್ಜೈನೇಶ್ವರ ಬಸವನಪ್ಪ ಬಣಕಾರ್ (ಹಿರೇಕೆರೂರು): ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1998-99ನೇ ಸಾಲಿನಲ್ಲಿ ಹೊಸ ಗ್ರಂಥಾಲಯಗಳನ್ನು ಸ್ಥಾಪಿಸಲಾಗಿದೆಯೇ?

ಆ) ಹಿರೇಕೆರೂರು ತಾಲ್ಲೂಕಿನ ಯಾವ ಗ್ರಾಮದಿಂದ ಗ್ರಂಥಾಲಯ ಸ್ಥಾಪನೆಗೆ ಕೋರಿಕೆ ಬಂದಿದೆ?

ಶ್ರೀ ಆರ್.ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು):

ಅ) ಹೌದು.

ಆ) ಹಿರೇಕೆರೂರು ತಾಲ್ಲೂಕಿನ ನಾಗವಂದ, ನೆಸ್ವಿ ಕುಡಪಲ್ಲಿ ಮತ್ತು ಕೋಡಾ ಗ್ರಾಮಗಳಿಂದ ಗ್ರಂಥಾಲಯ ಸ್ಥಾಪನೆ ಕುರಿತು ಕೋರಿಕೆ ಬಂದಿದೆ.

ಬಾದಾಮಿ ತಾಲ್ಲೂಕು ಕೇರೂರು ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸುವುದು.

1406 (2026)

ಶ್ರೀ ಬಿ.ಚಿಮ್ಮನಕಟ್ಟಿ ಬಾಲಪ್ಪ ಭೀಮಪ್ಪ (ಬಾದಾಮಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾದಾಮಿ ತಾಲ್ಲೂಕು ಕೆರೂರು ಪಟ್ಟಣಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭವಾದುದು ಯಾವಾಗ?

ಆ) ಕೆರೂರು ಪಟ್ಟಣದಲ್ಲಿ 25 ಸಾವಿರಕ್ಕಿಂತಲೂ ಹೆಚ್ಚು ಜನಸಂಖ್ಯೆ ಇರುವುದರಿಂದ ಈ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 1958ರಲ್ಲಿ ಪ್ರಾರಂಭ ಮಾಡಲಾಗಿದೆ.

ಆ) ಕೇಂದ್ರ ಸರ್ಕಾರದ ಮಾರ್ಗಸೂಚಿಯ ಪ್ರಕಾರ ಒಂದು ಲಕ್ಷ ಜನಸಂಖ್ಯೆಗೆ ಒಂದು ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಬಹುದಾಗಿದೆ.

ಬಾದಾಮಿ ಸಾರ್ವಜನಿಕ ಗ್ರಂಥಾಲಯ ಕುರಿತು.

1407 (2029)